**ಎಸ್.ಸಿ.ಸಂಖ್ಯೆಃ10035/2025**
**ಪ್ರಾ.ಸಾ.ಸಂಖ್ಯೆಃ 3**
**ಚಾ.ಸಾ.ಸಂಖ್ಯೆಃ 4**

**<u>ಪೀಠಾಸೀನಾಧಿಕಾರಿಗಳು, 03 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು , ಬಾಗಲಕೋಟೆ, ಉಪಸ್ಥಿತಿಃ ಮುಧೋಳ</u>**

**ಎಸ್.ಸಿ.ಸಂಖ್ಯೆಃ 10035/2025**

| | |
|---|---|
| ಹೆಸರುಃ | ಭಾಗಪ್ಪ ಹಿರಕನ್ನವರ |
| ತಂದೆಯ ಹೆಸರುಃ | ಭೀಮಪ್ಪ |
| ವಯಸ್ಸುಃ | **46** ವರ್ಷ |
| ಉದ್ಯೋಗಃ | ಒಕ್ಕಲುತನ |
| ವಾಸಃ | ಮಂಟೂರ |

**ಸಾಕ್ಷಿಯನ್ನು ದಿಃ 18.02.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯವಿಚಾರಣೆಃ ಸರ್ಕಾರಿ ಅಭಿಯೋಜಕರವರಿಂದಃ-</u>**

**1.** ದಿ: **22.06.2023** ರಂದು ಮಧ್ಯಾಹ್ನ **12-00** ಗಂಟೆಗೆ ಮುಧೋಳ ಪೊಲೀಸ್ ಠಾಣೆಗೆ ಕರೆದಿದ್ದರು. ಅಲ್ಲಿ ಒಂದು ಸ್ಪ್ಲೆಂಡರ್ ಮೋಟಾರ್ ಸೈಕಲ ನಂ. **6006** ಇತ್ತು. ಅಲ್ಲಿ ಪೊಲೀಸರು ನನ್ನನ್ನು ನಿಲ್ಲಿಸಿ ಪೊಟೊ ತೆಗೆದರು. ಆಗ ಗಂಗಪ್ಪ ಚಾಸಾ-**5** ಇದ್ದ. ಆ ಬಗ್ಗೆ ಪೊಲೀಸರು ಈಗ ನೋಡುತ್ತಿರುವ ದಾಖಲೆಯ ಮೇಲೆ ಸಹಿ ಪಡೆದರು. (ಸದರಿ ಪಂಚನಾಮೆಯನ್ನು ನಿಪಿ-**22** ಅಂತ, ಸಾಕ್ಷಿದಾರರ ಸಹಿಯನ್ನು ನಿಪಿ-**22**(ಎ) ಅಂತ ಗುರುತಿಸಲಾಯಿತು).

**<u>ಪಾಟಿಸವಾಲು: 3 ರಿಂದ 5ನೇ ಆರೋಪಿ ಪರ ಶ್ರೀ. ಎಸ್.ಜಿ.ಸಿ. ವಕೀಲರಿಂದ:</u>**

**1.** ನಿಪಿ-**22** ರಲ್ಲಿ ಪೊಲೀಸರು ಏನು ಬರೆದಿರುತ್ತಾರೆ ನನಗೆ ಗೊತ್ತಿಲ್ಲ. ಪಂಚನಾಮೆ ಪೂರ್ವದಲ್ಲಿ ಪೊಲೀಸರು ನನಗೆ ನೋಟೀಸು ನೀಡಿಲ್ಲ. ನಾನು ಚಾಸಾ-**1** ರವರ ಮಾತು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಮುಖ್ಯ ಸಾಕ್ಷಿಯಲ್ಲಿ ಹೇಳಿದಂತೆ ಪೊಲೀಸರು ಯಾವುದೇ ಪಂಚನಾಮೆಯನ್ನು ಮಾಡಿಲ್ಲ. ಮೋಟಾರ್ ಸೈಕಲನ್ನು ಜಪ್ತಿ ಮಾಡಿಲ್ಲ ಎಂದರೆ ಸರಿಯಲ್ಲ.

**<u>ಪಾಟಿಸವಾಲು: 1 & 2ನೇ ಆರೋಪಿ ಪರ ಶ್ರೀ.ಎ.ಎಸ್.ಎಸ್. ವಕೀಲರಿಂದ:</u>**

**ಎಸ್.ಸಿ.ಸಂಖ್ಯೆ: 10035/2025**
**ಪ್ರಾ.ಸಾ.ಸಂಖ್ಯೆ: 3**
**ಚಾ.ಸಾ.ಸಂಖ್ಯೆ: 4**

ಮೇಲಿನ ಪಾಟಿಸವಾಲನ್ನು ಅಳವಡಿಸಿಕೊಳ್ಳುತ್ತಾರೆ.

**ಮರು ವಿಚಾರಣೆ: ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ. ಸರಿ ಅದೆ.

**ಸಹಿ/-**

**3 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮುಧೋಳ.**